ಅವಧಿಪೂರ್ವ ವರ್ಗಾವಣೆ– ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ

೪೦೩೫. ಶ್ರೀ ಬಿ. ಎ. ಉಮರಬ್ಬ (ವಿಟ್ಲ).— ಮಾನ್ಯ ಸಮಾಜ ಕಲ್ಯಾಣ, ಯುವಜನ ಸೇವಾ ಮತ್ತು ಕ್ರೀಡಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಲ್ಲಿ ಈ ಬಾರಿ ನಡೆದ ವರ್ಗಾವಣೆಗಳಲ್ಲಿ ಅವಧಿಪೂರ್ವ ವರ್ಗಾವಣೆ ಏನಾದರೂ ಆಗಿದೆಯೇ?

ಆ) ಈ ವರ್ಗಾವಣೆಗೆ ಮುಖ್ಯ ಮಂತ್ರಿಗಳ ಅನುಮತಿ ಪಡೆಯಲಾಗಿತ್ತೆ?

ಶ್ರೀ ಪಿ.ಜಿ.ಆರ್. ಸಿಂಧ್ಯ (ಸಮಾಜ ಕಲ್ಯಾಣ, ಯುವಜನ ಸೇವಾ ಮತ್ತು ಕ್ರೀಡಾ ಮಂತ್ರಿಗಳು).—

ಆ) ಹೌದು.

ಅ) ಸಾಮಾನ್ಯ ವರ್ಗಾವಣೆ ಸಮಯದಲ್ಲಿ 'ಸಿ' ವರ್ಗಕ್ಕೆ ಸಂಬಂಧಪಟ್ಟ ಸಚಿವರು ಅವಧಿಪೂರ್ವ ವರ್ಗಾವಣೆಗಳನ್ನು ಮಾಡಬಹುದಾಗಿರುವುದರಿಂದ ಮಾನ್ಯ ಸಮಾಜ ಕಲ್ಯಾಣ ಸಚಿವರ ಆದೇಶ ಪಡೆದು ವರ್ಗಾವಣೆ ಮಾಡಲಾಗಿದೆ. ಕೆಲವು ಪ್ರಕರಣಗಳಲ್ಲಿ ನಿಯಮಾವಳಿಗಳ ಪ್ರಕಾರ ಮಾನ್ಯ ಮುಖ್ಯ ಮಂತ್ರಿಯವರ ಅನುಮತಿಯನ್ನು ಪಡೆಯಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿಗೆ ಬಸ್ಸುಗಳನ್ನು ಒದಗಿಸುವುದು

೪೦೩೭. ಶ್ರೀ ಬಿ.ಎ. ಉಮರಬ್ಬ (ವಿಟ್ಲ).— ಮಾನ್ಯ ಸಾರಿಗೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಸಾರ್ವಜನಿಕರು ಸಂಚಾರಕ್ಕಾಗಿ, ಬಸ್ಸುಗಳಿಗಾಗಿ ಸಲ್ಲಿಸಲಾಗಿರುವ ಕೋರಿಕೆಗಳೆಷ್ಟು? (ವಿವರ ಒದಗಿಸುವುದು),

ಆ) ಇವುಗಳನ್ನು ಎಷ್ಟು ಅವಧಿಯಲ್ಲಿ ಪೂರೈಸಲಾಗುತ್ತಿದೆ?

ಶ್ರೀ ಸಿದ್ದರಾಮಯ್ಯ (ಸಾರಿಗೆ ಮಂತ್ರಿಗಳು).—

ಅ) ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಸಾರ್ವಜನಿಕರಿಂದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ಸುಗಳ ಸೌಕರ್ಯಕ್ಕಾಗಿ ಸುಮಾರು ೧೬ ಬೇಡಿಕೆಗಳು ಬಂದಿವೆ. ಪಟ್ಟಿಯನ್ನು ಲಗತ್ತಿಸಿದೆ.

ಆ) ಈಗಾಗಲೇ ೯ ಬೇಡಿಕೆಗಳನ್ನು ಕಾರ್ಯಗತಗೊಳಿಸಲಾಗಿದೆ. ಇನ್ನು ೩ ಬೇಡಿಕೆಗಳನ್ನು ಶೀಘ್ರದಲ್ಲಿಯೇ ಕಾರ್ಯಗತಗೊಳಿಸಲಾಗುವುದು. ಉಳಿದ ನಾಲ್ಕು ಬೇಡಿಕೆಗಳನ್ನು ಕಾರ್ಯಗತಗೊಳಿಸಲು ಸಾಧ್ಯವಾಗದು.